**All India Radio: Bangalore**
**National Bulletin In Kannada**
**01.03.2025  13.10  p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**01.03.2025  13.10  p.m.**
**<><><><>**

ಮುಖ್ಯಾಂಶಗಳು

1. ನವದೆಹಲಿಯ ಎನ್‌ಎಕ್ಸ್‌ಟಿ ಸಮಾವೇಶದಲ್ಲಿಂದು ಸ್ಥಳೀಯದಿಂದ ಜಾಗತಿಕದ ದೃಷ್ಟಿಕೋನವನ್ನು ಪ್ರತಿಪಾದಿಸಿದ ಪ್ರಧಾನಿ ನರೇಂದ್ರ ಮೋದಿ
2. ಇದೇ ೩ ರಿಂದ ಸ್ಪೇನ್‌ನಲ್ಲಿ ಮೊಬೈಲ್ ವರ್ಲ್ಡ್ ಕಾಂಗ್ರೆಸ್: ಭಾರತವನ್ನು ಪ್ರತಿನಿಧಿಸಲಿರುವ ಕೇಂದ್ರ ಸಚಿವ ಜ್ಯೋತಿರಾಧಿತ್ಯಾ ಸಿಂಧಿಯಾ
3. ಮಣಿಪುರದ ಭದ್ರತಾ ಸ್ಥಿತಿಗತಿ ಕುರಿತು ನವದೆಹಲಿಯಲ್ಲಿಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ನೇತೃತ್ವದಲ್ಲಿ ಪರಿಶೀಲನಾ ಸಭೆ
4. ಮಹಿಳಾ ಪ್ರೀಮಿಯರ್ ಲೀಗ್ ಟಿ-೨೦ ಕ್ರಿಕೆಟ್: ಇಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು - ಡೆಲ್ಲಿ ಕ್ಯಾಪಿಟಲ್ಸ್ ಮುಖಾಮುಖಿ

<><><><>

ನವದೆಹಲಿಯ ಭಾರತ ಮಂಟಪಂನಲ್ಲಿ ನಡೆದ ಎನ್‌ಎಕ್ಸ್‌ಟಿ ಸಮಾವೇಶದಲ್ಲಿ ಪ್ರಧಾನಿ ನರೇಂದ್ರ ಮೋದಿ ಪಾಲ್ಗೊಂಡರು. ಈ ವೇಳೆ ಅವರು, ನ್ಯೂಸ್ ಎಕ್ಸ್ ವರ್ಲ್ಡ್ ಎಂಬ ವಾಹಿನಿಯನ್ನು ಅನಾವರಣಗೊಳಿಸಿದರು. ಸಮಾವೇಶವನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ಇಂದು ಯೋಗ ಮತ್ತು ಆಯುಷ್ ಉತ್ಪನ್ನಗಳನ್ನು ಸ್ಥಳೀಯದಿಂದ ಜಾಗತಿಕ ಮಟ್ಟಕ್ಕೆ ಕೊಂಡೊಯ್ಯಲಾಗಿದೆ. ಭಾರತದ ಸೂಪರ್ ಫುಡ್ ಮಖಾನ, ಸಿರಿಧಾನ್ಯಗಳು, ಶ್ರೀಅನ್ನ ಈಗ ಜಾಗತಿಕ ಮಟ್ಟದಲ್ಲಿ ಗಮನ ಸೆಳೆದಿವೆ. ನಮ್ಮ ದೇಶ ಜಗತ್ತಿನ ಶೇಕಡ ೬೦ರಷ್ಟು ಅರಿಶಿನವನ್ನು ಪೂರೈಕೆ ಮಾಡುತ್ತಿದೆ. ದೇಶೀಯ ಕಾಫಿಯು ಜಾಗತಿಕ ಮಟ್ಟದಲ್ಲಿ ಹೆಸರು ಮಾಡುತ್ತಿದ್ದು, ಪ್ರಸ್ತುತ ಭಾರತ ಜಗತ್ತಿನ ಏಳನೇ ಅತಿದೊಡ್ಡ ಕಾಫಿ ರಫ್ತುದಾರ ರಾಷ್ಟ್ರವಾಗಿದೆ ಎಂದರು.

***ಧ್ವನಿ **ಪಿಎಂ (೨೫ ಸೆಕೆಂಡ್‌ಗಳು)

<><><><>

ಈ ಬಾರಿಯ ಬಜೆಟ್‌ನಲ್ಲಿ ಘೋಷಿಸಲಾಗಿರುವ ನೀತಿಗಳಿಂದಾಗಿ ವಿಕಸಿತ ಭಾರತದ ದೃಷ್ಟಿಕೋನ ವಿಸ್ತಾರಗೊಂಡಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ನವದೆಹಲಿಯಲ್ಲಿಂದು ನಡೆದ ಕೃಷಿ ಮತ್ತು ಗ್ರಾಮೀಣ ಸಮೃದ್ಧಿ ಕುರಿತಾದ ವೆಬಿನಾರ್‌ಅನ್ನು ವರ್ಚುವಲ್ ಮೂಲಕ ಉದ್ದೇಶಿಸಿ ಮಾತನಾಡಿದ ಅವರು, ಎಲ್ಲಾ ಮಧ್ಯಸ್ಥಗಾರರ ಸಹಕಾರದೊಂದಿಗೆ ರೈತರ ಸಬಲೀಕರಣ ಹಾಗೂ ಅಭಿವೃದ್ಧಿಯನ್ನು ಖಾತ್ರಿಪಡಿಸುವ ಭಾರತದ ನಿರ್ಮಾಣದ ಹಾದಿಯಲ್ಲಿ ನಾವಿದ್ದೆವು. ಪ್ರತಿಯೊಬ್ಬ ರೈತನನ್ನು ಮುನ್ನೆಲೆಗೆ ತಂದು ಗೌರವ ನೀಡಲಾಗಿದೆ ಎಂದರು. ಕೃಷಿ ವಲಯದ ಅಭಿವೃದ್ಧಿ ಮತ್ತು ಗ್ರಾಮಗಳ ಸಮೃದ್ಧಿ ಎಂಬ ಎರಡು ಗುರಿಗಳೊಂದಿಗೆ ಮುನ್ನಡೆಯುತ್ತಿದ್ದೇವೆ. ಆರು ವರ್ಷಗಳ ಹಿಂದೆ ಜಾರಿ ಮಾಡಲಾದ ಪಿಎಂ-ಕಿಸಾನ್ ಸಮ್ಮಾನ್ ಯೋಜನೆ ಅಡಿ ಮೂರು ಮುಕ್ಕಾಲು ಲಕ್ಷ ಕೋಟಿ ರೂಪಾಯಿ ರೈತರ ಖಾತೆಗಳಲ್ಲಿ ಜಮಾ ಆಗಿದೆ ಎಂದು ಪ್ರಧಾನಿ ಹೇಳಿದರು. ೨೦೨೫ರ ಆಯವ್ಯಯದಲ್ಲಿ ಮಾಡಲಾದ ಘೋಷಣೆಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಕೇಂದ್ರೀಕೃತ ಚರ್ಚೆ ಮತ್ತು ಕಾರ್ಯತಂತ್ರ ರೂಪಿಸುವಲ್ಲಿ ಪಾಲುದಾರರನ್ನು ತೊಡಗಿಸಿಕೊಳ್ಳುವುದು ಈ ವೆಬಿನಾರ್‌ನ ಗುರಿಯಾಗಿದೆ. ಈ ಕಾರ್ಯಕ್ರಮ ಸಹಯೋಗದ ವಿಧಾನವನ್ನು ಅನುಸರಿಸಿ ಆಯವ್ಯಯದಲ್ಲಿ ವಿವರಿಸಿರುವ ದೃಷ್ಟಿಕೋನವನ್ನು ಸಾಕಾರಗೊಳಿಸಲು ಕೃಷಿ ಬೆಳವಣಿಗೆ ಮತ್ತು ಗ್ರಾಮೀಣ ಸಮೃದ್ಧಿಯ ಮೇಲೆ ಕೇಂದ್ರೀಕರಿಸಿದೆ.

<><><><>

ಪ್ರಧಾನಿ ನರೇಂದ್ರ ಮೋದಿ ಇಂದಿನಿಂದ ಮೂರು ದಿನಗಳ ಕಾಲ ಗುಜರಾತ್ ಪ್ರವಾಸ ಕೈಗೊಳ್ಳಲಿದ್ದಾರೆ. ಇಂದು ಸಂಜೆ ಅವರು, ಜಾಮ್‌ನಗರಕ್ಕೆ ಆಗಮಿಸಲಿದ್ದು, ಹಲವಾರು ಪ್ರಮುಖ ಸಭೆಗಳನ್ನು ನಡೆಸಲಿದ್ದಾರೆ. ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಬಿಜೆಪಿ ಅಭೂತಪೂರ್ವ ಗೆಲುವು ದಾಖಲಿಸಿದ ಬಳಿಕ ಪ್ರಧಾನಿ ಕೈಗೊಳ್ಳುತ್ತಿರುವ ಭೇಟಿ ಇದಾಗಿದೆ. ತಮ್ಮ ಭೇಟಿಯ ವೇಳೆ ಅವರು, ಶ್ರೀ ಸೋಮನಾಥ ಟ್ರಸ್ಟ್‌ನ ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಪ್ರವಾಸದ ಎರಡನೇ ದಿನ ಅವರು, ಜಾಮ್‌ನಗರದಲ್ಲಿರುವ ಅತ್ಯಾಧುನಿಕ ಪ್ರಾಣಿ ರಕ್ಷಣೆ, ಸಂರಕ್ಷಣೆ ಮತ್ತು ಪುನರ್‌ವಸತಿ ಕೇಂದ್ರವಾದ ವಂತಾರಕ್ಕೆ ಭೇಟಿ ನೀಡಲಿದ್ದಾರೆ. ಸುಮಾರು ೩ ಸಾವಿರ ಎಕರೆ ಪ್ರದೇಶದಲ್ಲಿ ವ್ಯಾಪಿಸಿರುವ ವಂತಾರ ರಕ್ಷಿಸಲ್ಪಟ್ಟ ವನ್ಯಜೀವಿಗಳು ಹಾಗೂ ಅಳಿವಿನಂಚಿನಲ್ಲಿರುವ ಪ್ರಬೇಧಗಳಿಗೆ ಅಭಯಾರಣ್ಯವಾಗಿ ಕಾರ್ಯ ನಿರ್ವಹಿಸುತ್ತಿದೆ. ಇದರ ಜತೆಗೆ ಪ್ರಧಾನಿ, ಜುನಾಗಢ್‌ನಲ್ಲಿ ರಾಷ್ಟ್ರೀಯ

ವನ್ಯಜೀವಿ ಮಂಡಳಿ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ವನ್ಯಜೀವಿ ಸಂರಕ್ಷಣಾ ನೀತಿಗಳು ಹಾಗೂ ರಾಷ್ಟ್ರೀಯ ಉದ್ಯಾನವನಗಳು ಹಾಗೂ ಅಭಯಾರಣ್ಯಗಳ ರಕ್ಷಣೆ ಕುರಿತು ಸಲಹೆ ನೀಡುವಲ್ಲಿ ಈ ಮಂಡಳಿ ಪ್ರಮುಖ ಪಾತ್ರವಹಿಸುತ್ತದೆ. ಸಭೆಯ ಬಳಿಕ ಪ್ರಧಾನಿ, ಮಹಿಳಾ ಅರಣ್ಯ ಸಿಬ್ಬಂದಿಯೊಂದಿಗೆ ಸಂವಾದ ನಡೆಸಲಿದ್ದಾರೆ.

<><><><>

ಸ್ಪೇನ್‌ನ ಬಾರ್ಸಿಲೋನಾದಲ್ಲಿ ಇದೇ ೩ ರಿಂದ ೬ರ ವರೆಗೆ ನಡೆಯಲಿರುವ ಜಗತ್ತಿನ ಅತಿ ದೊಡ್ಡ ತಂತ್ರಜ್ಞಾನ ಮತ್ತು ದೂರಸಂಪರ್ಕ ಸಮಾವೇಶಗಳಲ್ಲಿ ಒಂದಾದ ಮೊಬೈಲ್ ವರ್ಲ್ಡ್ ಕಾಂಗ್ರೆಸ್ ೨೦೨೫ರಲ್ಲಿ ಕೇಂದ್ರ ಸಚಿವ ಜ್ಯೋತಿರಾದಿತ್ಯಾ ಸಿಂಧಿಯಾ ಭಾರತವನ್ನು ಪ್ರತಿನಿಧಿಸಲಿದ್ದಾರೆ. ಈ ವೇಳೆ ಅವರು, 'ಭಾರತ ಪೆವಿಲಿಯನ್' ಅನ್ನು ಉದ್ಘಾಟಿಸಲಿದ್ದು, ಇಲ್ಲಿ ೩೮ ಭಾರತೀಯ ದೂರಸಂಪರ್ಕ ಉಪಕರಣ ತಯಾರಕರು ತಮ್ಮ ಉತ್ಪನ್ನಗಳನ್ನು ಪ್ರದರ್ಶಿಸಲಿದ್ದಾರೆ. ತಮ್ಮ ಭೇಟಿಯ ಸಮಯದಲ್ಲಿ ಸಚಿವರು, ೫ಜಿ, ಕೃತಕಬುದ್ಧಿಮತ್ತೆ, ೬ಜಿ, ಕ್ವಾಂಟಮ್ ಮತ್ತು ಮುಂದಿನ ಪೀಳಿಗೆಯ ಮೊಬೈಲ್ ತಂತ್ರಜ್ಞಾನಗಳ ಬೆಳವಣಿಗೆ ಕುರಿತಂತೆ ಜಾಗತಿಕ ಉದ್ಯಮ ನಾಯಕರು, ನೀತಿ ನಿರೂಪಕರು ಹಾಗೂ ನಾವಿನ್ಯಕಾರರೊಂದಿಗೆ ಸಮಾಲೋಚನೆ ನಡೆಸಲಿದ್ದಾರೆ. ತಮ್ಮ ಭೇಟಿಯ ಭಾಗವಾಗಿ ಅವರು, ಜಾಗತಿಕ ತಂತ್ರಜ್ಞಾನ ಆಡಳಿತ; ಸವಾಲುಗಳನ್ನು ಎದುರಿಸುವುದು ಹಾಗೂ ನಾವಿನ್ಯತೆ ಮತ್ತು ನಿಯಂತ್ರಣದ ಸಮತೋಲನ; ದೂರಸಂಪರ್ಕ ನೀತಿಯ ಕುರಿತು ಜಾಗತಿಕ ದೃಷ್ಟಿಕೋನಗಳು ಸೇರಿದಂತೆ ಹಲವಾರು ಪ್ರಮುಖ ಅಧಿವೇಶನವನ್ನುದ್ದೇಶಿಸಿ ಮಾತನಾಡುವ ನಿರೀಕ್ಷೆ ಇದೆ.

<><><><>

ನವದೆಹಲಿಯಲ್ಲಿ ಇಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ನೇತೃತ್ವದಲ್ಲಿ ಮಣಿಪುರದ ಭದ್ರತಾ ಸ್ಥಿತಿಗತಿ ಕುರಿತ ಪರಿಶೀಲನಾ ಸಭೆ ನಡೆಯಿತು. ಸಭೆಯಲ್ಲಿ ಗೃಹಸಚಿವರು, ಸದ್ಯದ ಸ್ಥಿತಿಗತಿಗಳನ್ನು ಅವಲೋಕಿಸಿ, ಪರಿಸ್ಥಿತಿ ನಿಯಂತ್ರಣಕ್ಕೆ ಕೈಗೊಳ್ಳಬೇಕಾದ ಕ್ರಮಗಳ ಕುರಿತಂತೆ ಭದ್ರತಾ ಪಡೆಗಳಿಗೆ ಅಗತ್ಯ ಸಲಹೆ ಸೂಚನೆಗಳನ್ನು ನೀಡಿದರು. ಮಣಿಪುರ ರಾಜ್ಯಪಾಲ ಅಜಯ್ ಕುಮಾರ್ ಬಲ್ಲಾ ಹಾಗೂ ರಾಜ್ಯ ಸರ್ಕಾರ ಮತ್ತು ಗೃಹ ಸಚಿವಾಲಯದ ಹಿರಿಯ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡರು.

<><><><>

ಉತ್ತರಾಖಂಡದ ಚಮೋಲಿ ಜಿಲ್ಲೆಯ ಮಾನಾ ಗ್ರಾಮದಲ್ಲಿ ನಿನ್ನೆ ಸಂಭವಿಸಿದ ಹಿಮಪಾತದಲ್ಲಿ ಸಿಲುಕಿದ್ದ ೪೭ ಕಾರ್ಮಿಕರನ್ನು ರಕ್ಷಿಸಲಾಗಿದ್ದು, ಇನ್ನು ಉಳಿದ ೮ ಜನರಿಗಾಗಿ ಶೋಧ ಕಾರ್ಯ ಮುಂದುವರಿದಿದೆ. ಈ ಕುರಿತು ಮಾಹಿತಿ ನೀಡಿರುವ ಗಡಿ ರಸ್ತೆಗಳ ಸಂಸ್ಥೆ - ಬಿಆರ್‌ಒದ ಕಮಾಂಡರ್ ಅಂಕುರ್ ಮಹಾಜನ್, ಭಾರತೀಯ ಸೇನೆ, ಬಿಆರ್‌ಒ, ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ ಹಾಗೂ ರಾಜ್ಯ ವಿಪತ್ತು ನಿರ್ವಹಣಾ ಪಡೆಗಳ ತಂಡಗಳು ಕಾರ್ಯಾಚರಣೆಯಲ್ಲಿ ತೊಡಗಿದ್ದಾರೆ ಎಂದಿದ್ದಾರೆ. ಪ್ರಸ್ತುತ ಹವಾಮಾನ ಹಾಗೂ ಹಿಮಪಾತದ ಕುರಿತು ಪ್ರಧಾನಮಂತ್ರಿ ನರೇಂದ್ರ ಮೋದಿ, ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಅವರೊಂದಿಗೆ ದೂರವಾಣಿ ಮೂಲಕ ಮಾಹಿತಿ ಪಡೆದಿದ್ದಾರೆ. ಪರಿಸ್ಥಿತಿ ಕುರಿತಂತೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಹಾಗು ರಕ್ಷಣಾ ಸಚಿವ ರಾಜನಾಥ್ ಸಿಂಗ್, ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಅವರೊಂದಿಗೆ ಮಾತುಕತೆ ನಡೆಸಿದ್ದು, ಸಾಧ್ಯವಾದ ಎಲ್ಲಾ ನೆರವು ನೀಡುವ ಭರವಸೆ ನೀಡಿದ್ದಾರೆ.

<><><>

ನವದೆಹಲಿಯಲ್ಲಿಂದು ಭಾರತ ಅಂತಾರಾಷ್ಟ್ರೀಯ ಮಧ್ಯಸ್ಥಿಕಾ ಕೇಂದ್ರ ಆಯೋಜಿಸಿದ್ದ ಅಂತಾರಾಷ್ಟ್ರೀಯ ಮಧ್ಯಸ್ಥಿಕೆ - ಭಾರತೀಯ ದೃಷ್ಟಿಕೋನ ಕುರಿತಾದ ಸಮ್ಮೇಳನದಲ್ಲಿ ಉಪರಾಷ್ಟ್ರಪತಿ ಜಗದೀಪ್ ಧನಕರ್ ಪಾಲ್ಗೊಂಡರು. ಈ ವೇಳೆ ಮಾತನಾಡಿದ ಅವರು, ಕಳೆದ ದಶಕದಲ್ಲಿ ದೇಶ ಕಂಡ ಪ್ರಗತಿ, ಭಾರತವನ್ನು ವಿಶ್ವದ ಅತ್ಯಂತ ಮಹತ್ವಾಕಾಂಕ್ಷೆಯ ರಾಷ್ಟ್ರವನ್ನಾಗಿ ಪರಿವರ್ತಿಸಿದೆ. ಜನ ಕೇಂದ್ರಿತ ನೀತಿಗಳಿಂದ ಪ್ರಯೋಜನ ಪಡೆದಿರುವ ಹಾಗೂ ಅಭಿವೃದ್ಧಿಯನ್ನು ಅನುಭವಿಸಿರುವ ಸಾರ್ವಜನಿಕರು ಇನ್ನೂ ಹೆಚ್ಚಿನ ಬೆಳವಣಿಗೆಯನ್ನು ನಿರೀಕ್ಷಿಸುತ್ತಿದ್ದಾರೆ ಎಂದರು.

<><><>

ಕೇಂದ್ರ ಸರ್ಕಾರ ಪಾಸ್‌ಪೋರ್ಟ್ ನಿಯಮಗಳನ್ನು ತಿದ್ದುಪಡಿ ಮಾಡಿದ್ದು, ಇನ್ನು ಮುಂದೆ ಅಧಿಕಾರಿಗಳು ನೀಡುವ ಜನನ ಪ್ರಮಾಣಪತ್ರಗಳು, ೨೦೨೩ರ ಅಕ್ಟೋಬರ್ ೧ ರಂದು ಅಥವಾ ನಂತರ ಜನಿಸಿದ ಪಾಸ್‌ಪೋರ್ಟ್ ಅರ್ಜಿದಾರರಿಗೆ ಜನ್ಮ ದಿನಾಂಕದ ಏಕೈಕ ಪುರಾವೆಯಾಗಿವೆ. ೧೯೮೦ ರ ಪಾಸ್‌ಪೋರ್ಟ್ ನಿಯಮಗಳಿಗೆ ತಿದ್ದುಪಡಿ ತರುವ ಅಧಿಕೃತ ಅಧಿಸೂಚನೆಯನ್ನು ಕೇಂದ್ರ ಸರ್ಕಾರದಿಂದ ಹೊರಡಿಸಲಾಗಿದೆ.

<><><>

ಬೆಂಗಳೂರಿನ ಎಂ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಮಹಿಳಾ ಪ್ರೀಮಿಯಲ್ ಲೀಗ್ - ಡಬ್ಲ್ಯೂಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ. ನಿನ್ನೆ ಇದೇ ಕ್ರೀಡಾಂಗಣದಲ್ಲಿ ನಡೆದ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ವಿರುದ್ಧ ಡೆಲ್ಲಿ ಕ್ಯಾಪಿಟಲ್ಸ್ ತಂಡ ೯ ವಿಕೆಟ್ ಗಳ ಜಯ ಸಾಧಿಸಿದೆ.  ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ಮುಂಬೈ ತಂಡ, ನಿಗದಿತ ೨೦ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೧೨೩ರನ್ ಗಳಿಸಿತು. ಇದಕುತ್ತರವಾಗಿ ಡೆಲ್ಲಿ ತಂಡ ೧೪.೩ ಓವರ್‌ಗಳಲ್ಲಿ ಒಂದು ವಿಕೆಟ್ ನಷ್ಟಕ್ಕೆ ೧೨೪ ರನ್ ಗಳಿಸಿ ಗೆಲುವು ತನ್ನದಾಗಿಸಿಕೊಂಡಿದೆ.

<><><><>

ಪಾಕಿಸ್ತಾನದ ಕರಾಚಿಯಲ್ಲಿಂದು ನಡೆಯಲಿರುವ ಐಸಿಸಿ ಚಾಂಪಿಯನ್ಸ್ ಟ್ರೋಫಿ ಏಕದಿನ ಕ್ರಿಕೆಟ್ ಪಂದ್ಯಾವಳಿಯ ಬಿ ಗುಂಪಿನ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ಹಾಗೂ ಇಂಗ್ಲೆಂಡ್ ತಂಡಗಳು ಮುಖಾಮುಖಿಯಾಗಲಿವೆ. ಈ ಪಂದ್ಯದಲ್ಲಿ ಗೆಲುವು ಅಥವಾ ಕನಿಷ್ಠ ಸಮಬಲ ಸಾಧಿಸಿದರೂ ಸೆಮಿಫೈನಲ್ ಪ್ರವೇಶಿಸಲು ದಕ್ಷಿಣಆಫ್ರಿಕಾಗೆ ಅವಕಾಶವಿದೆ. ಆದಾಗ್ಯೂ, ಇಂಗ್ಲೆಂಡ್ ತಂಡ ದಕ್ಷಿಣ ಆಫ್ರಿಕಾ ತಂಡವನ್ನು ೨೦೭ ಅಥವಾ ಅದಕ್ಕಿಂತ ಹೆಚ್ಚಿನ ರನ್‌ಗಳ ಅಂತರದಲ್ಲಿ ಸೋಲಿಸಲು ಯಶಸ್ವಿಯಾದರೆ ಅಫ್ಘಾನಿಸ್ತಾನ ಸೆಮಿಫೈನಲ್‌ಗೆ ಅರ್ಹತೆ ಪಡೆಯಲಿದೆ.ಲಾಹೋರ್‌ನಲ್ಲಿ ನಿನ್ನೆ ನಡೆದ ಆಸ್ಟ್ರೇಲಿಯಾ ಮತ್ತು ಅಫ್ಘಾನಿಸ್ತಾನ ನಡುವಿನ ಬಿ ಗುಂಪಿನ ಪಂದ್ಯ ಮಳೆಯಿಂದ ರದ್ದಾದ ಹಿನ್ನೆಲೆ ಆಸ್ಟ್ರೇಲಿಯಾ ಸೆಮಿಫೈನಲ್‌ಗೆ ಪ್ರವೇಶಿಸಿದೆ.  ಮೊದಲಿಗೆ ಟಾಸ್ ಗೆದ್ದು, ಬ್ಯಾಟಿಂಗ್ ಆಯ್ದುಕೊಂಡ ಅಫ್ಘಾನಿಸ್ತಾನ ನಿಗದಿತ ೫೦ ಓವರ್‌ಗಳಲ್ಲಿ ೨೭೩ ರನ್ ಗಳಿಸಿತು. ಇದಕ್ಕುತ್ತರವಾಗಿ ೨೭೪ ರನ್‌ಗಳ ಗುರಿ ಬೆನ್ನತ್ತಿದ್ದ ಆಸ್ಟ್ರೇಲಿಯಾ, ೧೨.೫ ಓವರ್‌ಗಳಲ್ಲಿ ಒಂದು ವಿಕೆಟ್ ನಷ್ಟಕ್ಕೆ ೧೦೯ ರನ್‌ಗಳಿಸಿದ್ದ ವೇಳೆ ಮಳೆ ಬಂದ ಪರಿಣಾಮ ಪಂದ್ಯವನ್ನು ರದ್ದುಗೊಳಿಸಲಾಯಿತು. ಆ ಮೂಲಕ ಆಸ್ಟ್ರೇಲಿಯಾ, ಭಾರತ ಹಾಗೂ ನ್ಯೂಜಿಲೆಂಡ್ ನಂತರ ಸೆಮಿಫೈನಲ್ ಪ್ರವೇಶಿದ ಮೂರನೇ ತಂಡವಾಯಿತು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>